# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ಮಂಜುನಾಥ, ಕಾರ್ಯದರ್ಶಿ, ಮಣ್ಣೆ ಗ್ರಾಮ ಪಂಚಾಯತಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರ ವಿರುದ್ಧ ಲೋಕಾಯುಕ್ತ ವಿಚಾರಣೆ ಕುರಿತು – ಅಂತಿಮ ಆದೇಶ ಹೊರಡಿಸುವ ಬಗ್ಗೆ – ಆದೇಶ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/414/ಗ್ರಾಪಂಕಾ/2017, ಬೆಂಗಳೂರು, ದಿನಾಂಕ: 19.05.2017.
2. ಅಪರ ನಿಬಂಧಕರು ವಿಚಾರಣೆಗಳು-10, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ: UPLOK-2/DE-752/2017/ARE-10, ದಿನಾಂಕ: 12.10.2018.
3. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: UPLOK-2/DE-752/2017/ARE-10, ದಿನಾಂಕ:16.10.2018
4. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಪತ್ರ ಸಂಖ್ಯೆ: UPLOK-2/DE-752/2017/ARE-10, ದಿನಾಂಕ:16.10.2018.

ಪ್ರಸ್ತಾವನೆ :

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಶ್ರೀ ಮಂಜುನಾಥ, ಕಾರ್ಯದರ್ಶಿ, ಮಣ್ಣೆ ಗ್ರಾಮ ಪಂಚಾಯತಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 14-ಎ ರಡಿಯಲ್ಲಿ ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಗಿತ್ತು. ಆದರಂತೆ ಅಪರ ನಿಬಂಧಕರು, ವಿಚಾರಣೆಗಳು-10, ಕರ್ನಾಟಕ ಲೋಕಾಯುಕ್ತ ಬೆಂಗಳೂರು ಇವರು ಸದರಿಯವರ ವಿರುದ್ಧ ಈ ಕೆಳಕಂಡ ಆರೋಪದ ಮೇಲೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11 ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿರುತ್ತಾರೆ.

"ದೋಷಾರೋಪಣೆ":

"ಆಪಾದಿತ ಸರ್ಕಾರಿ ನೌಕರರಾದ ಶ್ರೀ. ಮಂಜುನಾಥ್, ಕಾರ್ಯದರ್ಶಿ, ಮಣ್ಣೆ ಗ್ರಾಮ ಪಂಚಾಯಿತಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಆದ ನೀವು ಈ ಕೆಳಕಂಡ ಕರ್ತವ್ಯಲೋಪವೆಸಗಿರುತ್ತೀರಿ:-

ಶ್ರೀಮತಿ. ಹನುಮಕ್ಕ ಗಂಡ ಸಿದ್ಧಪ್ಪ ಇವರು ಖಾತೆ ಬದಲಾವಣೆಗೆ ಅರ್ಜಿ ಸಲ್ಲಿಸಿದಾಗ ವಂಶವೃಕ್ಷದಂತೆ ಖಾತೆ ನಂ. 73/110 ಪುಟ್ಟಲಕ್ಷ್ಮಮ್ಮ ಅವರ ಹೆಸರಿನಲ್ಲಿದ್ದು, ಆದರೆ ಇಂದಿರಾ ಆವಾಸ್ ಯೋಜನೆಯಡಿಯಲ್ಲಿ ಮನೆ ಕಟ್ಟಿಕೊಳ್ಳಲು ಹಣ ಮಂಜೂರಾಗಿರುವುದರಿಂದ ಪುಟ್ಟಲಕ್ಷ್ಮಮ್ಮನ 5 ಜನ ವಾರಸುದಾರರ ಪೈಕಿ ಹನುಮಕ್ಕ ಗಂಡ ಸಿದ್ಧಪ್ಪ ಇವರಿಗೆ ಅನುಕೂಲವಾಗಲೆಂದು ಅನುಬಂಧ 9 ಮತ್ತು 11ನ್ನು ನೀಡಲಾಗಿದೆಯೆಂದು ಆ.ಸ.ನೌಕರರಾದ ನೀವು ನಿಮ್ಮ ಆಕ್ಷೇಪಣೆಯಲ್ಲಿ ತಿಳಿಸಿರುತ್ತೀರಿ. ನಿಮ್ಮ ಈ ಕೃತ್ಯದಿಂದ ಪುಟ್ಟಲಕ್ಷ್ಮಮ್ಮನ ಇತರ 4 ಜನ ವಂಶಸ್ಥರಿಗೆ ಅನ್ಯಾಯವಾದಂತಾಗಿರುತ್ತದೆ. ಏಕೆಂದರೆ ಕಾನೂನು ಪ್ರಕಾರ ಮೃತ ವ್ಯಕ್ತಿಯ ವಾರಸುದಾರರ ಪೈಕಿ ಹನುಮಕ್ಕ ಗಂಡ ಸಿದ್ಧಪ್ಪ ಇವರಿಗೆ ಅನುಕೂಲಕವಾಗಲೆಂದು ಅನುಬಂಧ 9 ಮತ್ತು 11 ನ್ನು ನೀಡಲಾಗಿದೆಯೆಂದು ಆ.ಸ. ನೌಕರರಾದ ನೀವು ನಿಮ್ಮ ಆಕ್ಷೇಪಣೆಯಲ್ಲಿ ತಿಳಿಸಿರುತ್ತೀರಿ. ನಿಮ್ಮ ಈ ಕೃತ್ಯದಿಂದ ಪುಟ್ಟಲಕ್ಷ್ಮಮ್ಮ ಇತರ 4 ಜನ ವಂಶಸ್ಥರಿಗೆ ಅನ್ಯಾಯವಾದಂತಾಗಿರುತ್ತದೆ. ಏಕೆಂದರೆ ಕಾನೂನುಪ್ರಕಾರ ಮೃತ ವ್ಯಕ್ತಿಯ ವಾರಸುದಾರರೆಲ್ಲರಿಗೂ ಪೌತಿ ಖಾತೆ ಮಾಡಬೇಕಾಗುತ್ತದೆ. ಈ ಪ್ರಕರಣದಲ್ಲಿ ಹಾಜರುಪಡಿಸಿದ

ವಿಭಾಗಪತ್ರವು ನೋಂದಾಯಿಸಲ್ಪಟ್ಟಿರುವುದಿಲ್ಲ. ಆದರೂ ಸಹಾ ಈ ದಾಖಲೆಯ ಆಧಾರದ ಮೇಲೆ ಹನುಮಕ್ಕ ಗಂಡ ಸಿದ್ಧಪ್ಪ ಇವರಿಗೆ ಮಾತ್ರ ಅನುಬಂಧ 9 ಮತ್ತು 11 ನೀಡಿರುವುದು ಕಾನೂನುಬಾಹಿರವಾಗುತ್ತದೆ. ಏಕೆಂದರೆ ಈ ಆಸ್ತಿಗೆ ಇನ್ನುಳಿದ ವಾರಸುದಾರರು ಸಹ ಹಕ್ಕುದಾರರಾಗಿರುವುದರಿಂದ ಅವರು ಈ ಹಕ್ಕಿನಿಂದ ವಂಚಿತರಾಗಿರುತ್ತಾರೆ. ಆ.ಸ ನೌಕರರಾದ ನೀವು ಹನುಮಕ್ಕರವರಿಗೆ ಅನುಕೂಲವಾಗಲೆಂದು ಅನುಬಂಧ 9 ಮತ್ತು 11 ನ್ನು ನೀಡಿ ಅಧಿಕಾರ ದುರುಪಯೋಗಪಡಿಸಿಕೊಂಡು ಕರ್ತವ್ಯಲೋಪವೆಸಗಿರುತ್ತೀರಿ.

ಆದಕಾರಣ ಆಪಾದಿತ ಸರ್ಕಾರಿ ನೌಕರರಾದ ನೀವು ಸರ್ಕಾರಿ ಸೇವಕರಾಗಿದ್ದು, ನಿಮ್ಮ ಕರ್ತವ್ಯಪಾಲನೆಯಲ್ಲಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠೆಯನ್ನು ತೋರಿಸದೆ ಸ್ವಂತ ಲಾಭಕ್ಕಾಗಿ ಸಾರ್ವಜನಿಕ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿದ್ದು, ಆಪಾದಿತ ಸರ್ಕಾರಿ ನೌಕರರಾದ ನೀವು ಕರ್ನಾಟಕ ಸರ್ಕಾರಿ ಸೇವಾ (ನಡತೆ) ನಿಯಮಾವಳಿ 1966ರ ನಿಯಮ (3)(1) ನೇ ನಿಬಂಧನೆಯನ್ನು ಉಲ್ಲಂಘಿಸಿ ದುರ್ನಡತೆ ಎಸಗಿದ್ದೀರಿ."

ವಿಚಾರಣಾಧಿಕಾರಿಗಳು ಮೇಲೆ ಕ್ರಮ ಸಂಖ್ಯೆ(2) ರಲ್ಲಿ ಓದಲಾದ ವರದಿಯಲ್ಲಿ ಆಪಾದಿತ ನೌಕರರಾದ ಶ್ರೀ ಮಂಜುನಾಥ, ಕಾರ್ಯದರ್ಶಿ, ಮಣ್ಣೆ ಗ್ರಾಮ ಪಂಚಾಯತಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರ ವಿರುದ್ಧದ ಆರೋಪವು ಸಾಬೀತಾಗದಿರದ ಕಾರಣ ಇಲಾಖಾ ವಿಚಾರಣಾ ಪ್ರಕ್ರಿಯೆಯನ್ನು ಕೈ ಬಿಡಲು ನಿರ್ಧರಿಸಿರುವುದಾಗಿ ಅಪರ ನಿಬಂಧಕರು ವಿಚಾರಣೆಗಳು-10 ರವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿರುವ ವರದಿಯಲ್ಲಿ ತಿಳಿಸಿರುತ್ತಾರೆ.

ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರು ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ವರದಿಯಲ್ಲಿ ಅಪರ ನಿಬಂಧಕರು, ವಿಚಾರಣೆಗಳು-10 ರವರು ಸಲ್ಲಿಸಿರುವ ವರದಿಯನ್ನು ಅಂಗೀಕರಿಸಿ ಶ್ರೀ ಮಂಜುನಾಥ, ಕಾರ್ಯದರ್ಶಿ, ಮಣ್ಣೆ ಗ್ರಾಮ ಪಂಚಾಯತಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರ ವಿರುದ್ಧ ಆರೋಪಗಳು ಸಾಬೀತಾಗದಿರದ ಕಾರಣ ಸದರಿಯವರನ್ನು ಆರೋಪದಿಂದ ಮುಕ್ತಗೊಳಿಸಿರುತ್ತಾರೆ ಎಂದು ತಿಳಿಸಿರುವುದರಿಂದ ಸರ್ಕಾರವು ಆಪಾದಿತ ನೌಕರರ ವಿರುದ್ಧ ವಿಚಾರಣೆಯನ್ನು ಕೈಬಿಡಲು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/414/ಗ್ರಾಪಂಕಾ/2017, ಬೆಂಗಳೂರು, ದಿನಾಂಕ:20-12-2018.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಮಂಜುನಾಥ, ಕಾರ್ಯದರ್ಶಿ, ಮಣ್ಣೆ ಗ್ರಾಮ ಪಂಚಾಯತಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರ ವಿರುದ್ಧ ಆರೋಪಗಳು ಸಾಬೀತಾಗದಿರದ ಕಾರಣ ಸದ್ಧರಿಯವರ ವಿರುದ್ಧ ವಿಚಾರಣೆಯನ್ನು ಕೈಬಿಟ್ಟು ದೋಷಮುಕ್ತರನ್ನಾಗಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಮುಬಾರಕ್ ಅಹ್ಮದ್) 20/12
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಅಪರ ನಿಬಂಧಕರು, ವಿಚಾರಣೆಗಳು-10, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.

5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ.
6. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ
7. ಶ್ರೀ ಮಂಜುನಾಥ, ಕಾರ್ಯದರ್ಶಿ, ಮಣ್ಣೆ ಗ್ರಾಮ ಪಂಚಾಯತಿ, ನೆಲಮಂಗಲ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ
8. ಗಣಕ ಕೋಶ.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.